ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTE-EXAM0ECS 3/29/2025

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು – 560001
ದಿನಾಂಕ: 28/07/2025

## <u>ಸುತ್ತೋಲೆ</u>

ವಿಷಯ: ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯು 2025 ರ ಜುಲೈ ಮಾಹೆಯಲ್ಲಿ ಗಣಕಯಂತ್ರ ಶಿಕ್ಷಣ ಪರೀಕ್ಷೆಗಳನ್ನು ನಡೆಸಲು ಇಲಾಖೆಯ ಸರ್ಕಾರಿ/ಖಾಸಗಿ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಂಪ್ಯೂಟರ್ ಸೈನ್ಸ್ ಉಪನ್ಯಾಸಕರನ್ನು ನಿಯೋಜಿಸುವ ಬಗ್ಗೆ.

ಉಲ್ಲೇಖ: ನಿರ್ದೇಶಕರು, ಪರೀಕ್ಷೆಗಳು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಬೆಂಗಳೂರು-03 ಇವರ ಪತ್ರ ಸಂಖ್ಯೆ: 59850/KSEAB/DOE/S4(EXAM)/1/2025-S-SEC ದಿನಾಂಕ: 11/07/2025.

------------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಪತ್ರದಲ್ಲಿ ನಿರ್ದೇಶಕರು, ಪರೀಕ್ಷೆಗಳು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಬೆಂಗಳೂರು ಇವರು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯಡಿ 2025ರ ಜುಲೈ ಮಾಹೆಯಲ್ಲಿ ಗಣಕಯಂತ್ರ ಶಿಕ್ಷಣ ವಿಷಯದ ಪ್ರಾಯೋಗಿಕ ಪರೀಕ್ಷೆಗಳನ್ನು ದಿನಾಂಕ:28/07/2025 ರಿಂದ 02/08/2025 ರವರೆಗೆ ನಡೆಸಲಾಗುತ್ತಿದ್ದು, ಸದರಿ ಪರೀಕ್ಷಾ ದಿನಗಳಂದು ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲು ಕಂಪ್ಯೂಟರ್ ವಿಷಯವನ್ನು ಬೋಧಿಸುವ ಉಪನ್ಯಾಸಕರುಗಳನ್ನು ನಿಯೋಜಿಸುವಂತೆ ಕೋರಿ ಮನವಿ ಸ್ವೀಕೃತವಾದಲ್ಲಿ, ತಮ್ಮ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇಂಜಿನಿಯರಿಂಗ್/ಡಿಪ್ಲೋಮಾ, ವಿದ್ಯಾರ್ಹತೆ ಹೊಂದಿರುವ ಪಾಲಿಟೆಕ್ನಿಕ್ ಕಾಲೇಜುಗಳಿಂದ ಉಪನ್ಯಾಸಕರನ್ನು ನಿಯೋಜಿಸುವಂತೆ ತಿಳಿಸಿ ಮತ್ತು ಪರೀಕ್ಷೆ ನಡೆಯುವ ಪರೀಕ್ಷಾ ಕೇಂದ್ರಗಳ ಪಟ್ಟಿಯನ್ನು ಲಗತ್ತಿಸಿದ್ದು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ ವತಿಯಿಂದ ನಡೆಸುವ ಗಣಕಯಂತ್ರ ಶಿಕ್ಷಣ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲು ಅಗತ್ಯ ಸಹಕಾರ ನೀಡುವಂತೆ ಕೋರಿರುತ್ತಾರೆ.

ಮೇಲ್ಕಂಡ ಮನವಿ ಹಿನ್ನೆಲೆಯಲ್ಲಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ ಅಧಿಕಾರಿಗಳು ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರುಗಳನ್ನು ದಿನಾಂಕ:28/07/2025 ರಿಂದ ಪ್ರಾರಂಭವಾಗುತ್ತಿರುವ ಗಣಕಯಂತ್ರ ಶಿಕ್ಷಣ ಪರೀಕ್ಷೆಗಳನ್ನು ನಡೆಸುವ ಸಂಬಂಧ ಪ್ರಾಯೋಗಿಕ ಪರೀಕ್ಷಕರುಗಳನ್ನು ನಿಯೋಜಿಸಲು ಸಂಪರ್ಕಿಸುವರು.

ಪ್ರಯುಕ್ತ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ ಅಧಿಕಾರಿಗಳು ಹತ್ತಿರದ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳನ್ನು ಸಂಪರ್ಕಿಸಿದಾಗ ಪ್ರಸ್ತುತ ತಾಂತ್ರಿಕ ಪರೀಕ್ಷಾ ಮಂಡಳಿಯಲ್ಲಿ ಜುಲೈ 2025ರ Makeup ಪರೀಕ್ಷೆಯ ನಂತರ ಮೌಲ್ಯಮಾಪನ ಸಿದ್ಧತೆ ಮತ್ತು ಮೌಲ್ಯಮಾಪನ ಕಾರ್ಯಗಳು ನಡೆಯುತ್ತಿರುವುದರಿಂದ ಸದರಿ ಪರೀಕ್ಷಾ ಕಾರ್ಯಗಳಿಗೆ ಯಾವುದೇ ತೊಂದರೆಯಾಗದಂತೆ ಗಣಕಯಂತ್ರ ಶಿಕ್ಷಣ ಪರೀಕ್ಷೆಗಳಿಗೆ ಅರ್ಹ ಪ್ರಾಯೋಗಿಕ ಪರೀಕ್ಷಕರುಗಳನ್ನು ನೇಮಿಸಿ, ಪರೀಕ್ಷಾ ಗೌಪ್ಯತೆ ಮತ್ತು ಪಾವಿತ್ರ್ಯತೆ ಕಾಪಾಡುವಂತೆ ಸೂಚಿಸಿ, ಬಿಡುಗಡೆಗೊಳಿಸಿ ಸದರಿ ಪರೀಕ್ಷೆಗಳನ್ನು ನಡೆಸಲು ಅಗತ್ಯ ಸಹಕಾರ ನೀಡುವಂತೆ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ಪ್ರಾಯೋಗಿಕ ಪರೀಕ್ಷಕರಾಗಿ ಕಾರ್ಯ ನಿರ್ವಹಿಸಿದ ಉಪನ್ಯಾಸಕರು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ಬೆಂಗಳೂರು ಇವರಿಂದ ಸಂಭಾವನೆ ಮತ್ತು ಭತ್ಯೆ ಪಡೆಯಲು ಅರ್ಹರಿರುತ್ತಾರೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:
ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಅಗತ್ಯ ಕ್ರಮಕ್ಕಾಗಿ.

ಪ್ರತಿ:
1. ಮಾನ್ಯ ನಿರ್ದೇಶಕರು, ಪರೀಕ್ಷೆಗಳು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ,ಬೆಂಗಳೂರು –ಮಾಹಿತಿಗಾಗಿ
2. ಮಾನ್ಯ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು - ಆಪ್ತ ಶಾಖೆಗೆ ಮಾಹಿತಿಗಾಗಿ
3. ಮಾನ್ಯ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು - ಆಪ್ತ ಶಾಖೆಗೆ ಮಾಹಿತಿಗಾಗಿ
4. ಕಾರ್ಯದರ್ಶಿ, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು - ಮಾಹಿತಿಗಾಗಿ
5. ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.